ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ. ಎಚ್. ರಸ್ತೆ, ತುಮಕೂರು - 572 103

ಸಂಖ್ಯೆ: ತುವಿ : ಶೈವಿ : 2017–18 : 2109 ದಿನಾಂಕ: 01.09.2017

ಗೆ,

1) ಸ್ನಾತಕೋತ್ತರ ವಿಭಾಗಗಳ ಮುಖ್ಯಸ್ಥರು/ಸಂಯೋಜನಾಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
2) ಎಲ್ಲಾ ಘಟಕ ಮತ್ತು ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರುಗಳು

ಮಾನ್ಯರೆ,

ವಿಷಯ : ಹುತಾತ್ಮ ಸೈನಿಕರ ಗೌರವಾರ್ಥವಾಗಿ ಹುತಾತ್ಮ ಸೈನಿಕರ ಕುಟುಂಬದ ಹೆಣ್ಣುಮಕ್ಕಳಿಗೆ ಉಚಿತ ಶಿಕ್ಷಣ, ವಸತಿ ಮತ್ತು ಊಟದ ವ್ಯವಸ್ಥೆ ಕಲ್ಪಿಸುವ ಕುರಿತು.

ಉಲ್ಲೇಖ: ಸರ್ಕಾರದ ಪತ್ರ ಸಂಖ್ಯೆ: ಇಡಿ 299 ಯುಆರ್‌ಸಿ 2017 ದಿನಾಂಕ 25.07.2017

* * * *

ಉಲ್ಲೇಖ(1)ರ ಸರ್ಕಾರದ ಪತ್ರದಲ್ಲಿ ಹುತಾತ್ಮ ಸೈನಿಕರ ಗೌರವಾರ್ಥವಾಗಿ ಹುತಾತ್ಮ ಸೈನಿಕರ ಕುಟುಂಬದ ಹೆಣ್ಣುಮಕ್ಕಳಿಗೆ ಉಚಿತ ಶಿಕ್ಷಣ, ವಸತಿ ಮತ್ತು ಊಟದ ವ್ಯವಸ್ಥೆ ಕಲ್ಪಿಸಿರುತ್ತದೆ. ಸದರಿ ಪತ್ರದ ಪ್ರತಿಯನ್ನು ವಿಶ್ವವಿದ್ಯಾನಿಲಯದ ಅಂತರ್ಜಾಲ www.tumkuruniversity.ac.in ನಲ್ಲಿ ಪ್ರಕಟಿಸಲಾಗಿದೆ.

ಮೇಲ್ಕಂಡ ಸರ್ಕಾರದ ಪತ್ರದ ಪ್ರತಿಯನ್ನು ಇದರೊಂದಿಗೆ ಲಗತ್ತಿಸಲಾಗಿದ್ದು ಸರ್ಕಾರದ ಮಾರ್ಗಸೂಚಿಯಂತೆ ಕ್ರಮ ಕೈಗೊಳ್ಳುವಂತೆ ಈ ಮೂಲಕ ತಿಳಿಸಲಾಗಿದೆ.

ತಮ್ಮ ವಿಶ್ವಾಸಿ,

ಕುಲಸಚಿವರು

ಪ್ರತಿ:

1) ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು – ಅಗತ್ಯ ಕ್ರಮಕ್ಕಾಗಿ
2) ಕಚೇರಿ

e:\vd\kannada letters 2015.docx

ಕರ್ನಾಟಕ ಸರ್ಕಾರ

ಕ್ರಮಾಂಕ: ಇಡಿ 299 ಯುಆರ್‌ಸಿ 2017

ಕರ್ನಾಟಕ ಸರ್ಕಾರದ ಸಚಿವಾಲಯ;
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 25-7-2017

ಇಂದ
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ),
ಬೆಂಗಳೂರು - 560 001.

ಇವರಿಗೆ

1. ಕುಲಸಚಿವರು, ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು-560 056.
2. ಕುಲಸಚಿವರು, ಮೈಸೂರು ವಿಶ್ವವಿದ್ಯಾಲಯ, ಮೈಸೂರು-570 005.
3. ಕುಲಸಚಿವರು, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ-580 003.
4. ಕುಲಸಚಿವರು, ಗುಲ್ಬರ್ಗಾ ವಿಶ್ವವಿದ್ಯಾಲಯ, ಗುಲ್ಬರ್ಗಾ-585 106.
5. ಕುಲಸಚಿವರು, ಮಂಗಳೂರು ವಿಶ್ವವಿದ್ಯಾಲಯ, ಮಂಗಳೂರು-574 199.
6. ಕುಲಸಚಿವರು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ-577 451.
7. ಕುಲಸಚಿವರು, ಕನ್ನಡ ವಿಶ್ವವಿದ್ಯಾಲಯ, ಹಂಪಿ-583 276.
8. ಕುಲಸಚಿವರು, ಕರ್ನಾಟಕ ರಾಜ್ಯ ಮಹಿಳಾ ವಿಶ್ವವಿದ್ಯಾಲಯ, ಬಿಜಾಪುರ-586 101.
9. ಕುಲಸಚಿವರು, ತುಮಕೂರು ವಿಶ್ವವಿದ್ಯಾಲಯ, ತುಮಕೂರು-572 101.
10. ಕುಲಸಚಿವರು, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ, ಮೈಸೂರು.
11. ಕುಲಸಚಿವರು, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾನಿಲಯ, ಬೆಳಗಾವಿ.
12. ಕುಲಸಚಿವರು, ದಾವಣಗೆರೆ ವಿಶ್ವವಿದ್ಯಾಲಯ, ದಾವಣಗೆರೆ.
13. ಕುಲಸಚಿವರು, ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ.
14. ಕುಲಸಚಿವರು, ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ, ಬಳ್ಳಾರಿ.
15. ಕುಲಸಚಿವರು, ಕರ್ನಾಟಕ ರಾಜ್ಯ ಡಾ.ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ, ವಿಜಯನಗರ 4ನೇ ಹಂತ, 2ನೇ ಘಟ್ಟ, ಬಸವನಹಳ್ಳಿ ಅಂಚೆ, ಮೈಸೂರು-560 017.
16. ಕುಲಸಚಿವರು, ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ, ಜಯಚಾಮರಾಜೇಂದ್ರ ಸಂಸ್ಕೃತ ಕಾಲೇಜು ಆವರಣ, ಪಂಪಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು-560 018.
17. ಕುಲಸಚಿವರು, ಕರ್ನಾಟಕ ಜಾನಪದ ವಿಶ್ವವಿದ್ಯಾಲಯ, ಗೋಟಗೋಡಿ, ಹಾವೇರಿ ಜಿಲ್ಲೆ.

ಮಾನ್ಯರೆ,

ವಿಷಯ:- ಹುತಾತ್ಮ ಸೈನಿಕರ ಗೌರವಾರ್ಥವಾಗಿ ತಮ್ಮ ವಿಶ್ವವಿದ್ಯಾಲಯದಿಂದ ಹುತಾತ್ಮ ಸೈನಿಕರ ಕುಟುಂಬದ ಹೆಣ್ಣುಮಕ್ಕಳಿಗೆ ಉಚಿತ ಶಿಕ್ಷಣ, ವಸತಿ ಮತ್ತು ಊಟದ ವ್ಯವಸ್ಥೆ ಕಲ್ಪಿಸುವ ಕುರಿತು.

ಉಲ್ಲೇಖ:- 1) ಅಧ್ಯಕ್ಷರು, ಮೋದಿ ವಿಜ್ಞಾನ ಮತ್ತು ತಂತ್ರಜ್ಞಾನ ವಿಶ್ವವಿದ್ಯಾಲಯ (ಒಂದು ಪ್ರಮುಖ ಮಹಿಳಾ ವಿಶ್ವವಿದ್ಯಾಲಯ), ಲಕ್ಷ್ಮಣಗರ್ (ಸಿಕಾರ್), ರಾಜಸ್ತಾನ, ಇವರು ಮಾನ್ಯ ಮುಖ್ಯ ಮಂತ್ರಿಯವರಿಗೆ ಬರೆದಿರುವ ಪತ್ರ ದಿನಾಂಕ 20-10-2016.
2) ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್, ಇವರ ಪತ್ರ ಸಂಖ್ಯೆ:ಕರಾಉಶಿಪ/103/ಮೋದಿ ವಿವಿ/2016-17/937, ದಿ:15-6-2017.

---

ಮೇಲ್ಕಂಡ ವಿಷಯಕ್ಕೆ ಉಲ್ಲೇಖ (1)ರ ಪತ್ರದಲ್ಲಿ ಅಧ್ಯಕ್ಷರು, ಮೋದಿ ವಿಜ್ಞಾನ ಮತ್ತು ತಂತ್ರಜ್ಞಾನ ವಿಶ್ವವಿದ್ಯಾಲಯ (ಒಂದು ಪ್ರಮುಖ ಮಹಿಳಾ ವಿಶ್ವವಿದ್ಯಾಲಯ). ಲಕ್ಷ್ಮಣಗರ್ (ಸಿಕಾರ್). ರಾಜಸ್ತಾನ. ಇವರು ಇತ್ತೀಚೆಗೆ ಕಾಶ್ಮೀರದ ಊರಿ ಎಂಬ ಸ್ಥಳದಲ್ಲಿ ಸೇನೆಯ ಸಮೂಹದ ಮೇಲೆ ನಡೆದ ಉಗ್ರರ ಧಾಳಿಯ ಬಗ್ಗೆ ತೀವ್ರವಾದ ಸಂತಾಪ. ದು:ಖ. ಆತಂಕ ವ್ಯಕ್ತಪಡಿಸುತ್ತಾ ಹಾಗೂ ವೀರಯೋಧರ ಪ್ರಾಣ ತ್ಯಾಗವನ್ನು ಸ್ಮರಿಸುತ್ತಾ, ಸದರಿ ಹುತಾತ್ಮ ಸೈನಿಕರ ಗೌರವಾರ್ಥವಾಗಿ ತಮ್ಮ ವಿಶ್ವವಿದ್ಯಾಲಯದಿಂದ ಹುತಾತ್ಮ ಸೈನಿಕರ ಕುಟುಂಬದ ಹೆಣ್ಣುಮಕ್ಕಳಿಗೆ ಉಚಿತ ಶಿಕ್ಷಣ, ವಸತಿ ಮತ್ತು ಊಟದ

ವ್ಯವಸ್ಥೆಯನ್ನು 03ನೇ ತರಗತಿಯಿಂದ ಪಿಹೆಚ್‌ಡಿ ವರೆಗೆ ನೀಡಲಾಗುತ್ತಿದೆ ಎಂದು ತಿಳಿಸುತ್ತಾ, ಅಂತಹ ಹುತಾತ್ಮ ಕುಟುಂಬಗಳು ಕರ್ನಾಟಕ ರಾಜ್ಯದಲ್ಲಿರಬಹುದಾಗಿದ್ದು, ಅಂತಹ ಕುಟುಂಬದ ಹೆಣ್ಣುಮಕ್ಕಳಿಗೆ ವಿದ್ಯಾಭ್ಯಾಸಕ್ಕಾಗಿ ಅಗತ್ಯ ಕ್ರಮಕೈಗೊಳ್ಳುವಂತೆ ಮಾನ್ಯ ಮುಖ್ಯಮಂತ್ರಿಗಳನ್ನು ಕೋರಿರುತ್ತಾರೆ.

ಈ ವಿಷಯ ಕುರಿತು ದಿ: 5-5-2017 ರಂದು ನಡೆದ ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಸಾಮಾನ್ಯ ಸಭೆಯಲ್ಲಿ, ಈ ಕೆಳಕಂಡಂತೆ ನಿರ್ಣಯವನ್ನು ಕೈಗೊಳ್ಳಲಾಗಿರುತ್ತದೆ:-

" ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳಲ್ಲಿ "ಊರಿ" ಯಲ್ಲಿ ಹುತಾತ್ಮರಾದ ಕರ್ನಾಟಕ ರಾಜ್ಯದ ಸೈನಿಕರ ಕುಟುಂಬದ ಹೆಣ್ಣು ಮಕ್ಕಳಿಗೆ ಉಚಿತ ಶಿಕ್ಷಣ ಉಚಿತ ವಸತಿಯೊಂದಿಗೆ ಪದವಿ ಕೋರ್ಸಿನಿಂದ ಪಿಹೆಚ್.ಡಿ. ವರೆಗೆ ಪ್ರವೇಶ ನೀಡಲು ಸರ್ವಾನುಮತದಿಂದ ಅನುಮೋದಿಸಲಾಯಿತು"

ಮೇಲ್ಕಂಡ ನಿರ್ಣಯದಂತೆ ಅಗತ್ಯ ಕ್ರಮ ಕೈಗೊಳ್ಳುವಂತೆ ತಮ್ಮನ್ನು ಕೋರಲು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,

(ಎಂ.ಎ.ಅಹಮದ್ ಜಾನ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ವಿಶ್ವವಿದ್ಯಾನಿಲಯಗಳು-2)